ಕರ್ನಾಟಕ ಸರ್ಕಾರ
(ಪಿ.ಆರ್.ಪಿ.67)

| |
|---|
| ಹೇಳಿಕೆ ಹಾಳೆ<br>(ಆರ್.ಪಿ.ಸಂಖ್ಯೆ 57)<br>ನಮೂನೆ ಸಂಖ್ಯೆ 4 |

**ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ಹಾಗೂ ಸ್ಪೆಷಲ್ ನ್ಯಾಯಾಧೀಶರ ನ್ಯಾಯಾಲಯ, ಹಾಸನ**
**ಸ್ಪೆಷಲ್ ಕೇಸ್ ನಂಬರ್ : 92/2011**

**ಪ್ರಾಸಾ- 54 ಚಾಸಾ- 76**

| | | |
|---|---|---|
| ಸಾಕ್ಷಿದಾರರ ಹೆಸರುಃ | : | ಮುಸ್ತಫಾ ಪಾಷ |
| ತಂದೆಯ ಹೆಸರುಃ | : | ಬಶೀರ್ ಅಹಮದ್ |
| ವಯಸ್ಸುಃ | : | 69 ವರ್ಷ |
| ಉದ್ಯೋಗಃ | : | ವ್ಯಾಪಾರ |
| ವಾಸ | : | ಚನ್ನರಾಯಪಟ್ಟಣ |

**ಸಾಕ್ಷಿಯನ್ನು ಕರೆಸಿ ಪ್ರಮಾಣವಚನ ಬೋಧಿಸಿದ ದಿನಾಂಕ: 26-06-2025:**

**ಮುಖ್ಯ ವಿಚಾರಣೆಃ ಸರ್ಕಾರದ ಪರವಾಗಿ ಮಾನ್ಯ ವಿಶೇಷ ಅಭಿಯೋಜಕರಿಂದಃ**

ನಾನು ಕಳೆದ 40 ವರ್ಷಗಳಿಂದ ಚನ್ನರಾಯಪಟ್ಟಣದದಲ್ಲಿ ಅಕ್ಕಿ ವ್ಯಾಪಾರ ಮಾಡುತ್ತಿದ್ದೇನೆ. ನಾನು 1976-78ರಲ್ಲಿ ನಾನು ಕೆ ಎಸ್ ಆರ್.ಟಿ.ಸಿಯಲ್ಲಿ ಬದಲಿ ನಿರ್ವಾಹಕನಾಗಿ ತಾತ್ಕಾಲಿಕ ನೆಲೆಯಲ್ಲಿ ಕೆಲಸ ಮಾಡಿಕೊಂಡಿದ್ದೆನು. ಅದರ ಜೊತೆಗೆ ನಾನು 1978ರ ನಂತರ ಅಕ್ಕಿವ್ಯಾಪಾರ ಪ್ರಾರಂಭಿಸಿದೆನು. ನ್ಯಾಯಾಲಯದ ಮುಂದಿರುವ ಆರೋಪಿತರ ಪರಿಚಯವಿದೆ. ಆರೋಪಿತರು ಕೆ ಎಸ್ ಆರ್ ಟಿ ಸಿ ಬಸ್ ನಿರ್ವಾಹಕರಾಗಿದ್ದರು. ಆರೋಪಿತರಿಂದ ನಾನು ಯಾವುದೇ ಸಾಲವನ್ನು ಪಡೆದುಕೊಂಡಿಲ್ಲ. ಅವರ ಭಾವ ಧನಲಕ್ಷ್ಮೀ ಫೈನಾನ್ಸ್ ನಡೆಸುತ್ತಿದ್ದರು. ಅಲ್ಲಿಂದ ನಾನು 25ಸಾವಿರ ರೂಪಾಯಿ ಸಾಲ ಪಡೆದುಕೊಂಡಿದ್ದೆನು. ಆ ಸಾಲವನ್ನು ಧನಲಕ್ಷ್ಮೀ ಫೈನಾನ್ಸ್‌ಗೆ ತೀರಿಸಿರುತ್ತೇನೆ.

(ಈ ಹಂತದಲ್ಲಿ ಮಾನ್ಯ ವಿಶೇಷ ಅಭಿಯೋಜಕರು ಸಾಕ್ಷಿದಾರರನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರುತ್ತಾರೆ, ಕಡತವನ್ನು ಪರಿಶೀಲಿಸಲಾಗಿ ಸಾಕ್ಷಿಯು ದಾಖಲೆಗೆ ವ್ಯತಿರಿಕ್ತವಾಗಿ ಸಾಕ್ಷ್ಯನುಡಿಯುವುದು ಕಂಡುಬರುತ್ತದೆ, ಆದ್ದರಿಂದ ಮಾನ್ಯ ವಿಶೇಷ ಅಭಿಯೋಜಕರ ಕೋರಿಕೆಯನ್ನು ಮನ್ನಿಸಿ ಸಾಕ್ಷಿಯನ್ನು **ಭಾಗಶಃ** ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ, ಪಾಟೀಸವಾಲಿಗೆ ಒಳಪಡಿಸಲು ಅನುಮತಿ ನೀಡಲಾಗಿದೆ)

**<u>ಪಾಟೀಸವಾಲುಃ ಸರ್ಕಾರದ ಪರ ಮಾನ್ಯ ವಿಶೇಷ ಅಭಿಯೋಜಕರಿಂದಃ</u>**

ಆರೋಪಿತರಿಂದ ನಾನು 25ಸಾವಿರ ರೂಪಾಯಿ ಹಣವನ್ನು ಸಾಲ ಪಡೆದಿದ್ದೆನು, ಅದನ್ನು ಆರೋಪಿತರು ತಮ್ಮ ಬ್ಯಾಂಕ್ ಖಾತೆ ಚೆಕ್ ಮೂಲಕ ನನಗೆ ಕೊಟ್ಟಿದ್ದರು ಎಂದರೆ ಸರಿಯಲ್ಲ. ನಂತರ ಆ ಹಣವನ್ನು ನಾನು ನಗದಾಗಿ ಅದನ್ನು ದಿಃ3-5-2008ರಂದು ಕೊಟ್ಟು ತೀರಿಸಿರುತ್ತೇನೆ ಎಂದರೆ ಸರಿಯಲ್ಲ. ಈ ಎಲ್ಲಾ ವಿಚಾರವಾಗಿ ನಾನು ಈಗ ನನಗೆ ಓದಿ ಹೇಳಿದಂತೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಗೆ ಓದಿ ಹೇಳಿದ ಸದರಿ ಹೇಳಿಕೆಯ ಭಾಗವನ್ನು ನಿಪಿ-94 ಎಂದು ಗುರುತಿಸಲಾಯಿತು. ಆರೋಪಿತರಿಂದ ಸಾಲ ಪಡೆದಿದ್ದರೂ ಕೂಡ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯನುಡಿದಿರುತ್ತೇನೆ ಎಂದರೆ ಸರಿಯಲ್ಲ.

**<u>ಪಾಟೀಸವಾಲುಃ ಆರೋಪಿ ಪರ ಶ್ರೀ ಬಿ ಜೆ ಪಿ ಎಸ್ ವಕೀಲರಿಂದಃ</u>**

ನಾನು ಹಣದ ವ್ಯವಹಾರವನ್ನು ಧನಲಕ್ಷ್ಮೀ ಫೈನಾನ್ಸ್‌ನಲ್ಲಿ ಮಾಡಿದ್ದು ಎಂದರೆ ಸರಿ. ಸಾಲವನ್ನು ಪಡೆದದ್ದು ಅದೇ ಧನಲಕ್ಷ್ಮೀ ಫೈನಾನ್ಸ್‌ನಲ್ಲಿ ಮತ್ತು ಅದನ್ನು ವಾಪಸ್ ಕೊಟ್ಟದ್ದೂ ಅಲ್ಲೇ ಎಂದರೆ ಸರಿ.

<u>ಮರು ವಿಚಾರಣೆಃ ಇಲ್ಲ</u>

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೂಲಕ ಬೆರಳಚ್ಚು ಮಾಡಿಸಲಾಯಿತು)

**ಓ.ಹೇ.ಕೇ.ಸ.ಇದೆ.**

**ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ಹಾಗೂ ಸ್ಪೆಷಲ್**

**ನ್ಯಾಯಾಧೀಶರು, ಹಾಸನ.**